**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.86/2024.**

ಪಿರ್ಯಾದುದಾರರುಃ-  ಆಸಿಫ್ ಶರೀಫ್ ಹಸನ್ ಸಾಬ,
ವಯಸ್ಸು ಸುಮಾರುಃ- 42 ವರ್ಷ,
ಸಾಕೀನಃ- ಟೊಂಕಾ, ಕಾಸರಕೋಡ,
ತಾಲೂಕುಃ- ಹೊನ್ನಾವರ (ಉ.ಕ).

**-ವಿರುದ್ಧ-**

ಆರೋಪಿಯ ಹೆಸರುಃ-  ಇಸ್ಮಾಯಿಲ್ ಇಬ್ರಾಹಿಂ ಸಾಬ್,
ವೃತ್ತಿಃ ಪ್ರೊಪ್ರೈಟರ್: Al Farhan Sea Foods,
ಸಾಕೀನಃ- ಪಳ್ಳಿಕೇರಿ, ಅಂಚೆಃ ಹಳದೀಪುರ,
ತಾಲೂಕುಃ- ಹೊನ್ನಾವರ (ಉ.ಕ).

**ಆಪಾದನೆ**

ಶ್ರೀ ಅನಿಲ್ ಜೋನ್ ಸಿಕ್ವೇರಾ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ಆರೋಪಿಯಾದ ನೀವು, ಪಿರ್ಯಾದಿಯವರಿಂದ ಕೈಗಡವಾಗಿ ರೂ. 1,65,000/- ಗಳನ್ನು ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ನೀವು ಪಿರ್ಯಾದಿ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಬ್ಯಾಂಕ್ ಆಫ್ ಬರೋಡಾ, ಕುಮಟಾ** ಶಾಖೆಯ ಚೆಕ್ ನಂ.000020 ನ್ನು ದಿನಾಂಕ 29-12-2023 ರಂದು ರೂ.1,65,000/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಖಾತೆಯಿರುವ **ಕೆನರಾ ಬ್ಯಾಂಕ್., ಹೊನ್ನಾವರ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, Refer to drawer ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 30-12-2023 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 05-01-2024 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ 06-01-2024 ರಂದು ಜಾರಿಯಾಗಿದ್ದರೂ ಸಹ ನೀವು ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು

ಪ್ರಶ್ನೆ 2: ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ.)

ಸಹಿ ಇದೆ/-

**ದಿನಾಂಕಃ- 05-01-2026.**

**(ಅನಿಲ್ ಜೋನ್ ಸಿಕ್ವೇರಾ).,**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ., ಹೊನ್ನಾವರ.**

ಆರೋಪಿಯ ಸಹಿಃ- ಸಹಿ ಇದೆ.

****